# ಮತದಾನದ ಜಾಗೃತಿಗಾಗಿ ಮನೆ ಮನೆಗೆ ತೆರಳಿ

## ಬಿಎಲ್‌ಒಗಳಿಗೆ ತುಷಾರ್ ಗಿರಿನಾಥ್ ಸೂಚನೆ

**ಬೆಂಗಳೂರು:** ಲೋಕಸಭಾ ಚುನಾವಣೆಗೆ ಮತದಾರರು ಸ್ವಯಂಪ್ರೇರಿತವಾಗಿ ಮುಂದೆ ಬಂದು ಮತದಾನ ಮಾಡುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಬಿಎಲ್‌ಒಗಳಿಗೆ ಸೂಚನೆ ನೀಡಿದರು. ವಸಂತ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿ, ಬೂತ್ ಮಟ್ಟದ ಅಧಿಕಾರಿಗಳು ಚುನಾವಣಾ ಆಯೋಗದ ಅಂತಿಮ ಘಟ್ಟದ ಅಧಿಕಾರಿಗಳಾಗಿದ್ದು, ತಳಮಟ್ಟದಲ್ಲಿ ಜನರ ಸಂಪರ್ಕ ಹಾಗೂ ಅವರಿಂದ ಮತದಾನ ಮಾಡಿಸುವ ಸಾಮರ್ಥ್ಯವೆಲ್ಲವೂ ನಿಮ್ಮ ಬಳಿಯಿರಲಿದೆ. ಆದ್ದರಿಂದ ಎಲ್ಲರೂ ತಮ್ಮ ಆದ್ಯ ಕರ್ತವ್ಯವನ್ನು ತಿಳಿದು ಜನರಲ್ಲಿ ಅರಿವು ಮೂಡಿಸಿ ತಪ್ಪದೆ ಮತದಾನ ಮಾಡಿಸಬೇಕು. ಬೂತ್ ಮಟ್ಟದ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತರು ಮನೆ-ಮನೆ ಭೇಟಿ ನೀಡಿ ಮತದಾನದ ಪ್ರಾಮುಖ್ಯತೆ ಬಗ್ಗೆ ಅರಿವು ಮೂಡಿಸಬೇಕು. ನಗರದಲ್ಲಿ ಮತದಾನ ಶೇಕಡಾವಾರು ಹೆಚ್ಚಳಕ್ಕೆ ಎಲ್ಲರೂ ಶ್ರಮವಹಿಸಬೇಕು. 85 ವರ್ಷ ಮೇಲ್ಪಟ್ಟವರಿಗೆ ಅಂಚೆ ಮತದಾನವಿರುವ ಬಗ್ಗೆ ಮಾಹಿತಿ ನೀಡಬೇಕು ಎಂದರು. ಸ್ವೀಪ್ ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷ ಕಾಂತರಾಜು ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಯುದ್ಧ ವಿಮಾನದ ಪರೀಕ್ಷಾರ್ಥ ಹಾರಾಟ ಯಶಸ್ವಿ

## ತೇಜಸ್ ಎಂಕೆ 1ಎ ಏರ್‌ಕ್ರಾಫ್ಟ್ ಸರಣಿಯ ಎಲ್‌ಎ 5033 ವಿಮಾನ

**ಬೆಂಗಳೂರು:** ತೇಜಸ್ ಎಂಕೆ 1ಎ ಏರ್‌ಕ್ರಾಫ್ಟ್ ಸರಣಿ ಯ ಎಲ್‌ಎ 5033 ಯುದ್ಧ ವಿಮಾನ ಗುರುವಾರ ಬೆಂಗಳೂರಿನ ಎಚ್‌ಎಎಲ್ ವಿಮಾನ ಪರೀಕ್ಷಾರ್ಥ 18 ನಿಮಿಷಗಳ ಕಾಲ ಆಗಸದಲ್ಲಿ ಯಶಸ್ವಿ ಹಾರಾಟ ನಡೆ ಸಿದೆ. ವಿಮಾನವನ್ನು ಮುಖ್ಯ ಪರೀಕ್ಷಾ ಪೈಲಟ್, ಗ್ರೂಪ್ ಕ್ಯಾಪ್ಟನ್ ಕೆ.ಕೆ.ವೇಣುಗೋಪಾಲ್ (ನಿವೃತ್ತ) ಚಾಲನೆ ಮಾಡಿದ್ದರು.

ಪರೀಕ್ಷಾರ್ಥ ಹಾರಾಟದ ಕುರಿತು ಪ್ರತಿಕ್ರಿಯಿಸಿರುವ ಎಚ್‌ಎಎಲ್‌ನ ಸಿಎಂಡಿ ಸಿ.ಬಿ.ಅನಂತಕೃಷ್ಣನ್, 2021ರ ಫೆಬ್ರವರಿಯಲ್ಲಿ ನಡೆದ ಒಪ್ಪಂದದ ಪ್ರಕಾರ ಜಾಗತಿಕ ಭೌಗೋಳಿಕ- ರಾಜಕೀಯ ಪರಿಸರದಲ್ಲಿ ಪ್ರಮುಖ ವಿನ್ಯಾಸ ಮತ್ತು ಅಭಿವೃದ್ಧಿಯೊಂದಿಗೆ ಎಚ್‌ಎಎಲ್ ಮಹತ್ವದ ಉತ್ಪಾದನಾ ಮೈಲಿಗಲ್ಲು ಸಾಧಿಸಿದೆ. ಈ ಯಶಸ್ಸಿಗೆ ಸಹಕರಿಸಿದ ರಕ್ಷಣಾ ಇಲಾಖೆ, ಭಾರತೀಯ ವಾಯುಸೇನೆ, ಡಿಆರ್‌ಡಿಓ/ ಎಡಿಎ, ಸೆಮಿಲ್ಯಾಕ್, ಡಿಜಿಎಕ್ಯೂಎ ಮತ್ತು ಎಂಎಸ್‌ಎಂಇಗೆ ಧನ್ಯಾವದ ಸಲ್ಲಿಸುತ್ತೇನೆ. ಅವರ ನಿರಂತರ ಬೆಂಬಲದೊಂದಿಗೆ ಭಾರ ತೀಯ ವಾಯುಪಡೆಗೆ ತೇಜಸ್ ಎಂಕೆ1ಎ ಸೇರ್ಪಡೆಗೊಳ್ಳುತ್ತಿದೆ. ಎಚ್‌ಎಎಲ್ ನಲ್ಲಿ ಸ್ಥಾಪಿಸಲಾಗಿರುವ ಮೂರು ಉತ್ಪಾದನಾ ಕೇಂದ್ರಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯ ವಿಮಾನವನ್ನು ನಿರೀಕ್ಷಿಸಬಹುದಾಗಿದೆ ಎಂದಿದ್ದಾರೆ. ಎಚ್‌ಎಎಲ್ ಈಗಾಗಲೇ 32 ಸಿಂಗಲ್ ಸೀಟರ್‌ನ ಎಲ್‌ಸಿಎ ಫೈಟರ್ಸ್ ಮತ್ತು 8 ಸೀಟುಗಳ ಎರಡು ತರಬೇತಿ ವಿಮಾನಗಳನ್ನು ಸೇನೆಗೆ ಹಸ್ತಾಂತರಿಸಿದ್ದು, ಮಾ.2024- ಫೆಬ್ರವರಿ 2028ರೊಳಗಾಗಿ 83 ತೇಜಸ್ ಎಂಕೆ-1ಎ ವಿತರಣೆ ಪ್ರಾರಂಭಿಸಬೇಕಾಗಿದೆ. 46,898 ಕೋಟಿ ರು.ಮೊತ್ತದ ಒಪ್ಪಂದದೊಂದಿಗೆ 2021ರಲ್ಲಿ 83 ಸುಧಾರಿತ ತೇಜಸ್ ಮಾರ್ಕ್ 1ಎ ಉತ್ಪಾದಿಸಿ ವಿತರಿಸುವ ಗುರಿ ನೀಡಲಾಗಿದೆ.



### ವಿಮಾನದ ವೈಶಿಷ್ಟ್ಯಗಳೇನು?

ತೇಜಸ್ ಎಂಕೆ 1ಎ ಏರ್‌ಕ್ರಾಫ್ಟ್ ಸರಣಿಯ ಎಲ್‌ಎ 5033 ಯುದ್ಧ ವಿಮಾನವು ಸುಧಾರಿತ ಎಲೆಕ್ಟ್ರಾನಿಕ್ ರಡಾರ್, ಯುದ್ಧ ಸಂವಹನ ವ್ಯವಸ್ಥೆಗಳು, ಹೆಚ್ಚುವರಿ ಯುದ್ಧ ಸಾಮರ್ಥ್ಯ ಮತ್ತು ಸುಧಾರಿತ ನಿರ್ವಹಣಾ ವೈಶಿಷ್ಟ್ಯಗಳನ್ನು ಹೊಂದಿದೆ.

# ಕೆಎಸ್‌ಆರ್‌ಟಿಸಿ ಚಾಲಕರಿಗೆ ಡಬಲ್ ಡ್ಯೂಟಿಗೆ ಬ್ರೇಕ್

## ದೂರದ ಪ್ರಯಾಣಕ್ಕೆ ವಿಶ್ರಾಂತಿ ಕಡ್ಡಾಯ

**ಬೆಂಗಳೂರು:** ಕೆಎಸ್‌ಆರ್‌ಟಿಸಿ ಬಸ್ ಚಾಲಕರಿಗೆ ಡಬಲ್ ಡ್ಯೂಟಿ ಹೊರೆಯಿಂದ ಮುಕ್ತಿ ಸಿಕ್ಕಿದೆ. ಈ ಕುರಿತಂತೆ ಸಂಸ್ಥೆ ಆದೇಶ ಹೊರಡಿಸಿದ್ದು, ಕಡ್ಡಾಯವಾಗಿ ನಿಯಮಗಳನ್ನು ಪಾಲಿಸಬೇಕು ಎಂದು ಹೇಳಿದೆ. ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ರಾತ್ರಿ ಮತ್ತು ದೂರದ ಪ್ರಯಾಣಕ್ಕೆ ಓಡಿಸುವ ಚಾಲಕರು ಪ್ರಯಾಣದ ಬಳಿಕ ಚಾಲಕರು ವಿಶ್ರಾಂತಿ ಪಡೆಯು ವುದನ್ನು ಕಡ್ಡಾಯಗೊಳಿಸಲಾಗಿದೆ. ಅಲ್ಲದೆ, ಸತತ ಎಂಟು ಗಂಟೆಗಳಿಗಿಂತ ಹೆಚ್ಚು ಕಾಲ ಡ್ಯೂಟಿ ಮಾಡಿಸುವಂತಿಲ್ಲ. 8 ಗಂಟೆಗಳಿಗಿಂತ ಅಧಿಕ ಮತ್ತು ರಾತ್ರಿ ಪಾಳಿಯಲ್ಲಿ ಹೆಚ್ಚುವರಿ ಡ್ಯೂಟಿ ಮಾಡಿದರೆ ನಾಲ್ಕರಿಂದ ಐದು ಗಂಟೆಗಳ ಕಾಲ ವಿಶ್ರಾಂತಿಗೆ ಅವಕಾಶ ನೀಡಬೇಕು. ವಾರದ ಕೆಲಸದ ಅವಧಿ 48 ಗಂಟೆ ದಾಟುವಂತಿಲ್ಲ ಎಂದು ಸೂಚನೆ ನೀಡಿದೆ. ಕೆಎಸ್‌ಆರ್‌ಟಿಸಿ ಬಸ್‌ಗಳಿಂದ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆ ಇದಕ್ಕೆ ಕಾರಣ ಏನೆಂಬು ದನ್ನು ಪತ್ತೆಹಚ್ಚಲು ಸಮಿತಿ ರಚನೆ ಮಾಡಲಾಗಿತ್ತು. ಅದರಂತೆ ಡಬಲ್ ಡ್ಯೂಟಿ ಮತ್ತು ರಾತ್ರಿ ವೇಳೆ ವಿಶ್ರಾಂತಿ ನೀಡದಿರುವುದರಿಂದ ನಿದ್ದೆಗೆಟ್ಟು ಬಸ್ ಚಲಾಯಿಸಲು ಸಾಧ್ಯವಾಗದೆ ಅಪಘಾತಗಳು ಸಂಭವಿಸುತ್ತಿವೆ ಎಂದು ತಿಳಿದುಬಂದಿದೆ. ಈ ಸಂಬಂಧ ಸಮಿತಿಯು ಕೆಎಸ್‌ಆರ್‌ಟಿಸಿಗೆ ವರದಿ ಸಲ್ಲಿಸಿತ್ತು.

# ಲೋಕಸಭೆ ಚುನಾವಣೆ: ಬಿಜೆಪಿ ಜೆಡಿಎಸ್ ಸಮನ್ವಯ ಸಭೆ ಇಂದು

## ಎಚ್‌ಡಿಡಿ-ಬಿಎಸ್‌ವೈ ಸೇರಿ ಮತ್ತಿತರರು ಭಾಗಿ | ಚುನಾವಣೆಗೆ ಜಂಟಿ ತಂತ್ರಗಾರಿಕೆ

**ಬೆಂಗಳೂರು:** ರಾಜ್ಯದಲ್ಲಿ ಮೈತ್ರಿ ಮಾಡಿಕೊಂಡು ಲೋಕಸಭೆ ಚುನಾವಣೆ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಚುನಾವಣೆ ವೇಳೆ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಬಿಜೆಪಿ ಮತ್ತು ಜೆಡಿಎಸ್‌ನ ಸಮನ್ವಯ ಸಭೆಯನ್ನು ಶುಕ್ರವಾರ (ಮಾ. 29) ಕರೆಯಲಾಗಿದೆ.

ಶುಕ್ರವಾರ ಬೆಳಗ್ಗೆ 10.30ಕ್ಕೆ ನಗರದ ಖಾಸಗಿ ಹೋಟೆಲ್‌ನಲ್ಲಿ ಸಭೆ ನಡೆಯಲಿದ್ದು, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮಾಡಿಕೊಂಡು ಲೋಕಸಭೆ ಚುನಾವಣೆ ಎದುರಿಸುತ್ತಿದ್ದು, ಬಿಜೆಪಿ 25 ಮತ್ತು ಜೆಡಿಎಸ್ 3 ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತಿದೆ. ಚುನಾವಣಾ ಸಿದ್ಧತೆ, ಪ್ರಚಾರ, ಕಾರ್ಯತಂತ್ರಗಳ ಕುರಿತಾಗಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಈ ಸಭೆ ಕರೆಯಲಾಗಿದೆ.

ಇತ್ತೀಚೆಗೆ ನಡೆದ ಜೆಡಿಎಸ್ ಸಭೆಯಲ್ಲಿ ಮಿತ್ರ ಪಕ್ಷ ಬಿಜೆಪಿ ವಿರುದ್ಧ ಪಕ್ಷದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದರು. ಅಭ್ಯರ್ಥಿಗಳನ್ನು ಅಂತಿಮಗೊಳಿಸುವಾಗ ಬಿಜೆಪಿಯವರು ಜೆಡಿಎಸ್ ನಾಯಕರ ಅಭಿಪ್ರಾಯ ಕೇಳಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡುತ್ತಿಲ್ಲ. ಹೀಗಾದರೆ ಚುನಾವಣೆಯಲ್ಲಿ ಸಮಸ್ಯೆಯಾಗಬಹುದು ಎಂದು ಎಚ್ಚರಿಸಿದ್ದರು. ಈ ಬಗ್ಗೆ ಬಿಜೆಪಿ ನಾಯಕರೊಂದಿಗೆ ಸಮಾಲೋಚನೆ ನಡೆಸುವುದಾಗಿ ಸಭೆಯಲ್ಲಿ ಎಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದ್ದರು.

ಈ ಮಧ್ಯೆ ಎಲ್ಲಾ 28 ಕ್ಷೇತ್ರಗಳಲ್ಲಿ ಎರಡೂ ಪಕ್ಷಗಳ ಅಭ್ಯರ್ಥಿಗಳ ಆಯ್ಕೆ ಮುಗಿದಿದೆ. ಮೊದಲ ಹಂತದ 14 ಲೋಕಸಭಾ ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು, ಪ್ರಚಾರ ಶುರು ಮಾಡಬೇಕಿದೆ. ಪ್ರಚಾರಸಭೆಗಳಿಗೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಸೇರಿದಂತೆ ರಾಷ್ಟ್ರೀಯ ನಾಯಕರು ಆಗಮಿಸಲಿದ್ದಾರೆ.

ಈ ಸಂದರ್ಭದಲ್ಲಿ ಎರಡೂ ಪಕ್ಷಗಳ ಮಧ್ಯೆ ಗೊಂದಲವಾಗದಂತೆ ಯಾವ ರೀತಿ ಕಾರ್ಯಕ್ರಮಗಳನ್ನು ರೂಪಿಸಬೇಕು? ಯಾವೆಲ್ಲಾ ನಾಯಕರು ಯಾವ್ಯಾವ ಭಾಗದಲ್ಲಿ ಪ್ರಚಾರ ಕೈಗೊಳ್ಳಬೇಕು? ಕಾರ್ಯಕರ್ತರ ಮಧ್ಯೆ ಸಮನ್ವಯ ಸಾಧಿಸಲು ಏನು ಯೋಜನೆ ಹಮ್ಮಿಕೊಳ್ಳಬೇಕು? ಚುನಾವಣಾ ಕಾರ್ಯತಂತ್ರಗಳು ಹೇಗಿರಬೇಕು ಮತ್ತು ಯಾವ ರೀತಿ ಅನುಷ್ಠಾನಕ್ಕೆ ತರಬೇಕು ಎಂಬಿತ್ಯಾದಿ ವಿಚಾರಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

**ದೇವೇಗೌಡರ ಪ್ರವಾಸ ನಿರ್ಧಾರ**

ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಜೆಡಿಎಸ್ ಸ್ಪರ್ಧಿಸುವ ಮೂರು ಕ್ಷೇತ್ರಗಳು ಮಾತ್ರವಲ್ಲದೆ, ಬಿಜೆಪಿ ಅಭ್ಯರ್ಥಿಗಳು ಸ್ಪರ್ಧಿಸುವ ಕ್ಷೇತ್ರಗಳಲ್ಲೂ ಪ್ರಚಾರಸಭೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರಮುಖವಾಗಿ ಜೆಡಿಎಸ್ ಪ್ರಬಲವಾಗಿರುವ ಹಳೇ ಮೈಸೂರು ಭಾಗದಲ್ಲಿ ಪ್ರಚಾರಕ್ಕೆ ಅವರು ಹೆಚ್ಚು ಒತ್ತು ನೀಡಲಿದ್ದಾರೆ. ಹೀಗಾಗಿ ಬಿಜೆಪಿ ಅಭ್ಯರ್ಥಿಗಳಿರುವ ಯಾವೆಲ್ಲಾ ಕ್ಷೇತ್ರಗಳಲ್ಲಿ ದೇವೇಗೌಡರು ಪ್ರಚಾರ ಮಾಡಬೇಕು ಎಂಬ ಬಗ್ಗೆ ಸಭೆಯಲ್ಲಿ ತೀರ್ಮಾನ ಕೈಗೊಳ್ಳುವ ಸಾಧ್ಯತೆಗಳಿವೆ.

ಇದರ ಜತೆಗೆ ಪ್ರಧಾನಿ ಹೊರತುಪಡಿಸಿ ಉಳಿದ ಬಿಜೆಪಿ ರಾಷ್ಟ್ರೀಯ ನಾಯಕರು, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾಸ್ ಶರ್ಮಾ ಮತ್ತಿತರರ ಪ್ರಚಾರ ಸಭೆಗಳ ಬಗ್ಗೆಯೂ ಸಮಾಲೋಚನೆ ನಡೆಸಲಾಗುವುದು. ಜೆಡಿಎಸ್ ಸ್ಪರ್ಧಿಸಿರುವ ಕ್ಷೇತ್ರಗಳಲ್ಲೂ ಈ ನಾಯಕರು ಪ್ರಚಾರ ಕೈಗೊಳ್ಳಲು ಅನುಕೂಲವಾಗುವಂತೆ ವೇಳಾಪಟ್ಟಿ ಸಿದ್ಧಪಡಿಸಲಾಗುವುದು. ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಗುವುದು ಎಂದು ಪಕ್ಷದ ಮೂಲಗಳು ತಿಳಿಸಿವೆ.



### ಸಭೆಯಲ್ಲಿ ಚರ್ಚೆಯಾಗುವ ವಿಷಯಗಳು

- ಲೋಕಸಭಾ ಕ್ಷೇತ್ರಗಳಲ್ಲಿ ಜಂಟಿ ಪ್ರಚಾರಕ್ಕೆ ಅಗತ್ಯ ಕಾರ್ಯತಂತ್ರ
- ಸ್ಥಳೀಯ ಮಟ್ಟದಲ್ಲಿ ಬಿಜೆಪಿ-ಜೆಡಿಎಸ್ ಕಾರ್ಯಕರ್ತರ ಮಧ್ಯೆ ಸಮನ್ವಯ
- ಉಭಯ ಪಕ್ಷಗಳ ನಾಯಕರ ಪ್ರಚಾರ ಸಭೆಗಳ ಸ್ಥಳ ಮತ್ತು ದಿನಾಂಕ ನಿಗದಿ
- ಪ್ರಧಾನಿ ಮೋದಿ ಭಾಗವಹಿಸುವ ಸಭೆಗಳಿಗೆ ಜೆಡಿಎಸ್ ನಾಯಕರಿಗೆ ಆಹ್ವಾನ
- ರಾಜ್ಯಕ್ಕೆ ಸಂಬಂಧಿಸಿದಂತೆ ಉಭಯ ಪಕ್ಷಗಳ ಚುನಾವಣಾ ಪ್ರಣಾಳಿಕೆ

# ಐಟಿ, ಬಿಟಿ ಕಂಪನಿಗಳಿಗೆ ನೀರು ಸಮರ್ಪಕ ಪೂರೈಕೆಗೆ ಬದ್ಧ

## ವೆಬಿನಾರ್ ಮೂಲಕ ಆರ್ಕಾ ಪದಾಧಿಕಾರಿಗಳೊಂದಿಗೆ ಡಾ. ವಿ.ರಾಮ್ ಪ್ರಸಾತ್ ಮನೋಹರ್ ಸಭೆ

**ಬೆಂಗಳೂರು:** ನಗರದ ಇತರೆ ಪ್ರದೇಶಗಳಂತೆಯೇ ನಗರದ ಹೊರವಲಯದಲ್ಲಿರುವ ಐಟಿ-ಬಿಟಿ ಕಂಪನಿಗಳಿಗೂ ನೀರಿನ ಕೊರತೆಯಾಗದಂತೆ ನೋಡಿಕೊಳ್ಳಲಾಗುವುದು. ಸಮರ್ಪಕ ನೀರು ಪೂರೈಸಲು ಮಂಡಳಿ ಬದ್ಧವಾಗಿದೆ ಎಂದು ಬೆಂಗಳೂರು ಜಲ ಮಂಡಳಿ ಅಧ್ಯಕ್ಷ ಡಾ.ವಿ. ರಾಮ್ ಪ್ರಸಾತ್ ಮನೋಹರ್ ಹೇಳಿದ್ದಾರೆ.

ಔಟರ್ ರಿಂಗ್ ರೋಡ್ ಕಂಪನೀಸ್ ಅಸೊಸಿಯೇ ಶನ್ (ಆರ್ಕಾ) ಪದಾಧಿಕಾರಿಗ ಳೊಂದಿಗೆ ಗುರುವಾರ ವೆಬಿನಾರ್ ಮೂಲಕ ಸಭೆ ನಡೆಸಿ ಮಾತನಾಡಿ, ನಗರದಲ್ಲಿ ನೀರಿನ ಕೊರತೆಯನ್ನು ಸಮರ್ಥವಾಗಿ ನಿಭಾಯಿಸಲಾಗುತ್ತಿದೆ. ಇದೆ ರೀತಿ ಐಟಿ, ಬಿಟಿ ಕಂಪನಿಗಳಿಗೂ ಸಮರ್ಪ ಕವಾಗಿ ನೀರು ಪೂರೈಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು. ಕಾವೇರಿ 5ನೇ ಹಂತ ಪೂರ್ಣಗೊಂಡರೆ ನಗರಕ್ಕೆ ಪ್ರತಿದಿನ ಹೆಚ್ಚುವರಿ 775 ಎಂಎಲ್‌ಡಿ ನೀರು ಸಿಗಲಿದೆ. ಇದರಿಂದ ನೀರಿನ ಕೊರತೆ ಕಡಿಮೆಯಾಗಲಿದೆ ಎಂದರು. ಅಗತ್ಯವಿರುವ ಕಂಪನಿಗಳು ಹಾಗೂ ಸಂಸ್ಥೆಗ ಳಿಗೆ ಸಂಸ್ಕರಿಸಿದ ನೀರನ್ನು ಸರಬರಾಜು ಮಾಡ ಲು ಜಲಮಂಡಳಿ ಸಿದ್ಧವಿದೆ. ಅಪಾರ್ಟ್‌ಮೆಂಟ್‌ಗಳು, ವಾಣಿಜ್ಯ ಕಟ್ಟಡಗಳು, ಕೈಗಾರಿಕಾ ಪ್ರದೇಶ ಗಳು, ರೆಸ್ಟೋರೆಂಟ್‌ಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಅನಗತ್ಯ ವಾಗಿ ನೀರು ಪೋಲಾ ಗುವುದನ್ನ ತಡೆಯಲು ಏರಿಯೇಟರ್ ಹಾಗೂ ಫ್ಲೋ ಕಂಟ್ರೋಲರ್ ಅಳವಡಿಸಿಕೊಳ್ಳುವ ನಿಟ್ಟಿ ನಲ್ಲಿ ಮಂಡಳಿ ಕ್ರಮವಹಿಸಿದೆ. ತಾವು ಕೂಡ ಇದಕ್ಕೆ ಸಾಥ್ ನೀಡಬೇಕು ಎಂದು ಮನವಿ ಮಾಡಿದರು.

ನೀರಿನ ಸಮಸ್ಯೆಗೆ ಪಂಚ ಸೂತ್ರ ಸಿದ್ಧಗೊಳಿಸಿದ್ದು, ಕಂಪನಿಗಳು ಈ ಐದು ಸೂತ್ರಗಳನ್ನು ಅಳವಡಿಸಿಕೊಳ್ಳುವ ಮೂಲಕ ಗ್ರೀನ್ ಸ್ಟಾರ್ ಹೊಂದಲು ಮುಂದಾಗಬೇಕು ಎಂದು ಕಿವಿಮಾತು ಹೇಳಿದರು.

- ಅಂತರ್ಜಲ ಕುಸಿತದಿಂದ ಕುಡಿಯುವ ನೀರಿಗೆ ಕೊರತೆ
- ಕಾವೇರಿ ನೀರನ್ನು ಪೋಲು ಮಾಡುವವರಿಗೆ ದಂಡ
- ಕಂಪನಿಗಳಿಗೆ ಸಂಸ್ಕರಿಸಿದ ನೀರು ಸರಬರಾಜು ಮಾಡಲು ಸಿದ್ಧ



ಔಟರ್ ರಿಂಗ್ ರೋಡ್ ಕಂಪನೀಸ್ ಅಸೊಸಿಯೇಶನ್ ಜತೆ ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಸಭೆ ನಡೆಸಿದರು.

ಮಿತವಾಗಿ ನೀರನ್ನು ಬಳಸುವಂತೆ ಕಂಪನಿಯ ನೌಕರರಲ್ಲಿ ಜಾಗೃತಿ ಮೂಡಿಸಬೇಕು. ನೀರಿನ ಸದ್ಬಳಕೆ ಹಾಗೂ ಅದರ ಸೂಕ್ತ ಬಳಕೆಗಾಗಿ ಜಲಮಂಡಳಿ ವತಿಯಿಂದ ಮೂರು ಸೂತ್ರಗಳ ಬಗ್ಗೆ ಪ್ರಚಾರ ಮಾಡಲಾಗುತ್ತಿದೆ. ನೀರು ಸಂರಕ್ಷಣೆ, ಸಂಸ್ಕರಿಸಿದ ನೀರು ಬಳಕೆ, ಮಳೆ ನೀರು ಸಂರಕ್ಷಣೆ ಮತ್ತು ಮರುಪೂರಣದ ಬಗ್ಗೆ ಜಾಗೃತಿ ಮೂಡಿಸಿ.

-ಡಾ.ವಿ. ರಾಮ್ ಪ್ರಸಾತ್ ಮನೋಹರ್
ಜಲ ಮಂಡಳಿ ಅಧ್ಯಕ್ಷ

## ಸಮಾಚಾರ ಸಣ್ಣದಲ್ಲ

### 30ರಂದು ಮೂರು ದತ್ತಿ ಪ್ರಶಸ್ತಿ ಪ್ರದಾನ

**ಬೆಂಗಳೂರು:** ಕನ್ನಡ ಸಾಹಿತ್ಯ ಪರಿಷತ್ತಿನಿಂದ ಮೂರು ದತ್ತಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಮಾ.30ರ ಸಂಜೆ 5 ಗಂಟೆಗೆ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಆಯೋಜಿಸಲಾಗಿದೆ. ಬೀದರ್‌ನ ಶರಣ ಸಾಹಿತಿ ಅಕ್ಕ ಡಾ.ಅನ್ನಪೂರ್ಣ ತಾಯಿ, ಬೆಳಗಾವಿ ಶರಣ ಸಾಹಿತಿ ವಿನೋದ ಸುರೇಂದ್ರ, ದೊಡ್ಡಣ್ಣವರ, ಬೆಂಗಳೂರಿನ ವಿಶೇಷ ದೃಷ್ಟಿ ಚೇತನ ಬರಹಗಾರರಾದ ರಮಾ ಫಣಿ ಭಟ್ ಗೋಪಿ ಮತ್ತು ಮಾಹಿತಿ ಹಕ್ಕು ತಜ್ಞ ಡಾ.ವೈ.ಜಿ.ಮುರಳೀಧರನ್ ಈ ಸಮಾರಂಭದಲ್ಲಿ ದತ್ತಿ ಪುರಸ್ಕಾರಗಳನ್ನು ಸ್ವೀಕರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿಯವರು ವಹಿಸಲಿದ್ದು, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರು ಮತ್ತು ಪ್ಯಾರಾ ಅಂತಾರಾಷ್ಟ್ರೀಯ ಕ್ರೀಡಾಪಟು ಡಾ.ಕೆ.ಎಸ್.ರಾಜಣ್ಣನವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಅಧ್ಯಕ್ಷ ನಾಡೋಜ ಡಾ.ಮನು ಬಳಿಗಾರ್, ಕರ್ನಾಟಕ ಎಂಜಿನಿಯರಿಂಗ್ ಸರ್ವೀಸ್ ಅಸೋಸಿಯೇಷನ್ ಅಧ್ಯಕ್ಷ ಶಿವಾನಂದ .ಪಿ.ಹೂಗಾರ, ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ರಾಜ್ಯಾಧ್ಯಕ್ಷ ಪಿ.ಮಹೇಶ್ ಉಪಸ್ಥಿತರಿರು ತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

### ಬೆಂಗಳೂರಿನಲ್ಲಿ 6.22 ಲಕ್ಷ ಹೊಸ ಮತದಾರರು

**ಬೆಂಗಳೂರು:** ರಾಜ್ಯ ರಾಜಧಾನಿಯಲ್ಲಿ ಬೆಂಗಳೂರಿನಲ್ಲಿ ಈ ಬಾರಿ 6.22 ಯುವ ಮತದಾರರಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಬೆಂಗಳೂರು ದಕ್ಷಿಣ, ಕೇಂದ್ರ ಹಾಗೂ ಉತ್ತರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈ ಬಾರಿ 6,22,047 ಲಕ್ಷ ಮತದಾರರು ಸೇರ್ಪಡೆಯಾಗಿದ್ದಾರೆ. ಈ ಪೈಕಿ 2,80,572 ಪುರುಷರು, 3,41,254 ಮಹಿಳೆಯರು ಹಾಗೂ 221 ಲೈಂಗಿಕ ಅಲ್ಪಸಂಖ್ಯಾತ ಮತದಾರರಿದ್ದಾರೆ. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ 16,29,089 ಪುರುಷ, 15,44,415 ಮಹಿಳೆ, 594 ಇತರೆ ಮತದಾರರು ಸೇರಿದಂತೆ ಒಟ್ಟು 31,74,098 ಮತದಾರರಿದ್ದಾರೆ. ಬೆಂಗಳೂರು ಕೇಂದ್ರದಲ್ಲಿ 12,36,897 ಪುರುಷ, 11,61,548 ಮಹಿಳೆ, 465 ಇತರೆ ಮತದಾರರು ಸೇರಿದಂತೆ 23,98,910 ಮತದಾರರಿದ್ದರೆ, ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ 11,95,285 ಪುರುಷರು, 11,21,788 ಮಹಿಳಾ, 399 ಇತರರು ಸೇರಿದಂತೆ 23,17,472 ಮತದಾರರಿದ್ದು, ಒಟ್ಟಾರೆ ಮೂರು ಕ್ಷೇತ್ರಗಳಲ್ಲಿ 78,90,480 ಮತದಾರರಿದ್ದಾರೆ ಎಂದು ತಿಳಿಸಿದೆ.

### ಮೊದಲ ದಿನ 29 ಅಭ್ಯರ್ಥಿಗಳ ನಾಮಪತ್ರ

**ಬೆಂಗಳೂರು:** ಏ. 26ರಂದು 14 ಲೋಕಸಭೆ ಕ್ಷೇತ್ರಗಳಿಗೆ ನಡೆಯಲಿರುವ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಗುರುವಾರ ಆರಂಭವಾಗಿದ್ದು, 13 ಕ್ಷೇತ್ರಗಳಿಗೆ ಒಟ್ಟು 29 ಮಂದಿ ಉಮೇದುವಾರಿಕೆ ಸಲ್ಲಿಸಿದ್ದಾರೆ. ಈ ಪೈಕಿ ಬಿಜೆಪಿಯಿಂದ 1, ಕಾಂಗ್ರೆಸ್‌ನಿಂದ 2, ಬಿಎಸ್‌ಪಿ ಮತ್ತು ಜೆಡಿಎಸ್‌ನಿಂದ ತಲಾ ಒಬ್ಬರು ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಸಿದವರಲ್ಲಿ 26 ಪುರುಷರು, ಮೂವರು ಮಹಿಳೆಯರಿದ್ದಾರೆ. ಬೆಂಗಳೂರು ಕೇಂದ್ರದಲ್ಲಿ ಅತಿ ಹೆಚ್ಚು ಅಂದರೆ 6 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ಬೆಂಗಳೂರು ಉತ್ತರ, ಹಾಸನ, ಮೈಸೂರು ಕ್ಷೇತ್ರಗಳಲ್ಲಿ ತಲಾ 3, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ದಕ್ಷಿಣ ಕನ್ನಡ, ಮಂಡ್ಯ, ತುಮಕೂರು ಕ್ಷೇತ್ರಗಳಲ್ಲಿ ತಲಾ 2, ಚಾಮರಾಜನಗರ, ಚಿಕ್ಕಬಳ್ಳಾಪುರ, ಕೋಲಾರ, ಉಡುಪಿ-ಚಿಕ್ಕಮಗಳೂರಲ್ಲಿ ತಲಾ ಒಂದು ನಾಮಪತ್ರ ಸಲ್ಲಿಕೆಯಾಗಿದೆ.

### ಶೇ.50ರ ರಿಯಾಯಿತಿ ಪುಸ್ತಕ ಮಾರಾಟ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪ್ರಯುಕ್ತ ಏ. 1 ರಿಂದ 30 ರವರೆಗೆ ಶೇ.50ರಷ್ಟು ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಮಾಡಲಾಗುತ್ತದೆ. ಆನ್‌ಲೈನ್ www.kuvempubhashabharathi.karnataka.gov.in ಮೂಲಕವೂ ಶೇ 50ರಷ್ಟು ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದ್ದು, ಓದುಗರು ಇದರ ಸದುಪಯೋಗ ಪಡೆದುಕೊಳ್ಳಬಹು ದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಟ್ಯಾಂಕರ್‌ಗಳಿಂದ ಕುಡಿವ ನೀರು ಹೋಟೆಲ್‌ಗಳಿಗೆ ಮಾರಾಟ

## ಪ್ರಶ್ನೆಗೆ ಚಾಲಕರ ಉತ್ತರವಿಲ್ಲ | ವಸಂತನಗರ ಜನರಿಂದ ಆರೋಪ

**ಬೆಂಗಳೂರು:** ವಸಂತನಗರ ರಸ್ತೆಯಲ್ಲಿ ರಾಜಾರೋಷವಾಗಿ ಕುಡಿಯಲು ಬಳಸಬೇಕಾದ ನೀರನ್ನು ಟ್ಯಾಂಕರ್ ಮೂಲಕ ಹೋಟೆಲ್‌ಗಳಿಗೆ ಮಾರಾಟ ಮಾಡುತ್ತಿರುವ ಆರೋಪ ಕೇಳಿ ಬಂದಿದೆ.

ನಗರದಲ್ಲಿ ನೀರಿನ ಅಭಾವ ಹೆಚ್ಚಾಗುತ್ತಿರುವುದರಿಂದ ಇದರ ನಿರ್ವಹಣೆಗಾಗಿ ಜಲಮಂಡಳಿಯಿಂದ ನಾನಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಕುಡಿಯುವ ನೀರನ್ನು ಮಾರಾಟ ಮಾಡುವುದು, ಅನ್ಯ ಬಳಕೆಗೆ ಉಪಯೋಗ ಮಾಡಿಕೊಳ್ಳುವುದನ್ನು ನಿಷೇಧಿ ಸಲಾಗಿದೆ. ಆದರೆ, ವಸಂತನಗರದ ಮುಖ್ಯ ರಸ್ತೆಯಲ್ಲಿ ಅಪಾರ್ಟ್‌ಮೆಂಟ್ ಒಂದು ಕುಡಿಯಲು ಎಂದು ಬೋರ್‌ವೆಲ್ ನೀರಿನ ಸಂಪರ್ಕ ಪಡೆದುಕೊಂಡು ಮೋಟಾರ್‌ನಿಂದ ಟ್ಯಾಂಕರ್‌ಗಳಿಗೆ ತುಂಬಿಸಿ ಮಾರಾಟ ಮಾಡುತ್ತಿದೆ. ಇದಕ್ಕೆ ತಿಂಗಳಿಗೆ 30 ಸಾವಿರ ರು. ಪಡೆಯಲಾಗುತ್ತಿದೆ ಎನ್ನುವ ಆರೋಪ ಗಳು ಕೇಳಿ ಬಂದಿವೆ. ಈ ಕುರಿತು ನೀರಿನ ಮಾರಾಟಕ್ಕೆ ಅನುಮತಿ ಪಡೆಯಲಾಗಿದೆಯೇ ಎಂದು ಟ್ಯಾಂಕರ್ ಚಾಲಕನನ್ನು ಪ್ರಶ್ನಿಸಿದರೆ ಉತ್ತರಿಸುತ್ತಿಲ್ಲ. ಬಿಬಿಎಂಪಿ ಹಾಗೂ ಜಲಮಂಡಳಿಯ ಅನುಮತಿಯಿಲ್ಲದೆ ಕಾವೇರಿ ಕುಡಿಯುವ ನೀರನ್ನು ಹೊಟೇಲ್ ಹಾಗೂ ಅನ್ಯ ಬಳಕೆಗಾಗಿ ಸರಬರಾಜು ಮಾಡಲಾಗುತ್ತಿದೆ. ನೀರನ್ನು ಗೃಹಬಳಕೆಗಾಗಿ ಪಡೆದುಕೊಂಡು ಈ ಕುರಿತು ಯಾವುದೇ ಅಧಿಕಾರಿಗಳಿಗೂ ಮಾಹಿತಿ ನೀಡದೇ ವಾಣಿಜ್ಯ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ಎಂದು ಆರೋಪಿಸಲಾಗಿದೆ.




ಕುಡಿಯುವ ಅಗತ್ಯಕ್ಕಾಗಿ ಪಡೆದುಕೊಂಡರೆ ಯಾವುದೇ ಸಮಸ್ಯೆಯಿಲ್ಲ. ಆದರೆ ವಾಣಿಜ್ಯೋದ್ದೇಶಕ್ಕಾಗಿ ಬಳಸಿಕೊಳ್ಳಲು ಅನುಮತಿ ನೀಡಬಾರದು. ಮೊದಲೇ ಬೆಂಗಳೂರಿನಲ್ಲಿ ಕುಡಿಯಲು ಸಮರ್ಪಕವಾಗಿ ನೀರಿಲ್ಲ. ಹೀಗಿರುವಾಗ ಈ ರೀತಿ ಕಳ್ಳತನದಿಂದ ಸಾಗಿಸುವವರ ವಿರುದ್ಧ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು.

-ಸ್ಥಳೀಯರು

# ರಾಜಕೀಯ ಪಕ್ಷಗಳ ಖರ್ಚು-ವೆಚ್ಚಗಳ ಮೇಲೆ ನಿಗಾ

## ಕಾರ್ಯಪ್ರವೃತ್ತವಾದ ಚುನಾವಣಾ ವೆಚ್ಚ ನಿರ್ವಹಣಾ ತಂಡಗಳು: ತುಷಾರ್ ಗಿರಿನಾಥ್

**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಹಾಗೂ ರಾಜಕೀಯ ಪಕ್ಷಗಳ ಖರ್ಚು-ವೆಚ್ಚಗಳ ಮೇಲೆ ನಿಗಾವಹಿಸಲು ಚುನವಣಾ ಆಯೋಗದಿಂದ ನೇಮಿಸಲ್ಪಟ್ಟ ಚುನಾವಣಾ ವೆಚ್ಚ ವೀಕ್ಷಕರೊಂದಿಗೆ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸಂವಾದ ನಡೆಸಿದರು.

ಕುಮಾರ ಕೃಪ ಸಭಾಂಗಣದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆ ಮಾದರಿ ನೀತಿ ಸಂಹಿತೆ ಜಾರಿಯ ಕುರಿತು ಚುನಾವಣಾ ವೆಚ್ಚ ವೀಕ್ಷಕರು, ಚುನಾವಣಾಧಿಕಾರಿಗಳು ಹಾಗೂ ಇತರೆ ನೋಡಲ್ ಅಧಿಕಾರಿಗಳ ಜತೆ ನಡೆದ ಸಂವಾದದ ಬಳಿಕ ಮಾತನಾಡಿ, ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ವ್ಯಾಪ್ತಿಯಲ್ಲಿ ಬರುವ 3 ಲೋಕಸಭಾ ಕ್ಷೇತ್ರಗಳಲ್ಲಿ ತೆಗೆದುಕೊಂಡಿರುವ ಕ್ರಮಗಳ ಕುರಿತು ಚುನಾವಣಾ ವೀಕ್ಷಕರಿಗೆ ಮಾಹಿತಿ ನೀಡಲಾಗಿದೆ ಎಂದರು.

ಗುರುವಾರದಿಂದ ಬೆಂಗಳೂರಿನ ಮೂರು ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭವಾಗಿದ್ದು, ಚುನಾವಣಾ ವೆಚ್ಚಗಳ ಪರಿಶೀಲನೆಗಾಗಿ ಅಗತ್ಯವಿರುವ ವಿಎಸ್‌ಟಿ, ವಿವಿಟಿ ಹಾಗೂ ಚುನಾವಣಾ ವೆಚ್ಚ ನಿರ್ವಹಣಾ ತಂಡಗಳು ಕಾರ್ಯಪ್ರವೃತ್ತವಾಗಿರುವುದಾಗಿ ಮಾಹಿತಿ ನೀಡಿದರು.

ನಗರದಲ್ಲಿ ಸ್ಥಾಪಿಸಿರುವ 102 ಚೆಕ್ ಪೋಸ್ಟ್‌ಗಳಲ್ಲಿ ಎಸ್‌ಎಸ್‌ಟಿ ತಂಡಗಳು ಸಕ್ರಿಯವಾಗಿ ವಾಹನಗಳನ್ನು ಪರಿಶೀಲಿಸಿ, ದಾಖಲೆಯಿಲ್ಲದ ಹಣ, ಮದ್ಯ, ಮಾದಕ ವಸ್ತು ಸೇರಿದಂತೆ ಇನ್ನಿತರೆ ವಸ್ತುಗಳನ್ನು ವಶಪಡಿಸಿಕೊಳ್ಳುತ್ತಿವೆ. ನೀತಿ ಸಂಹಿತೆಯ ಉಲ್ಲಂಘನೆಗಳ ಮೇಲೆ ಎಫ್‌ಎಸ್‌ಸಿ ತಂಡಗಳು ನಿಗಾವಹಿಸುತ್ತಿದ್ದು, ಯಾವುದೇ ಉಲ್ಲಂಘನೆ ಕಂಡುಬಂದಲ್ಲಿ ತಕ್ಷಣವೇ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ.

ಎಂಸಿಸಿ ನೋಡಲ್ ಅಧಿಕಾರಿ ಮುನೀಶ್ ಮೌದ್ಗಿಲ್, ಚುನಾವಣಾ ಆಯೋಗದ ವಿಶೇಷ ಆಯುಕ್ತ ಸೆಲ್ವಮಣಿ, ಚುನಾವಣಾಧಿಕಾರಿಗಳಾದ ಡಾ.ಕೆ.ಹರೀಶ್ ಕುಮಾರ್, ಡಾ.ಕೆ.ದಯಾನಂದ್, ವಿನೋತ್ ಪ್ರಿಯಾ, ಎಂಸಿಎಂಸಿ ನೋಡಲ್ ಅಧಿಕಾರಿ, ಖರ್ಚು ನೋಡಲ್ ಅಧಿಕಾರಿ, ಪೊಲೀಸ್ ನೋಡಲ್ ಅಧಿಕಾರಿಗಳು ಇದ್ದರು.



ನೀತಿ ಸಂಹಿತೆ ಮತ್ತು ಚುನಾವಣಾ ವೆಚ್ಚಕ್ಕೆ ಸಂಬಂಧಿಸಿದಂತೆ ನಗರ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

### ನಿಯಂತ್ರಣ ಕೊಠಡಿಗಳ ಸ್ಥಾಪನೆ

ನೀತಿ ಸಂಹಿತೆಗಳ ಉಲ್ಲಂಘನೆಗಳ ಮೇಲೆ ನಿಗಾವಹಿಸಲು ಹಾಗೂ ನಾಗರೀಕರಿಂದ ದೂರುಗಳನ್ನು ಸ್ವೀಕರಿಸುವ ಸಲುವಾಗಿ ಬಿಬಿಎಂಪಿ ಕೇಂದ್ರ ಕಚೇರಿ, ಅಪರ ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಹಾಗೂ ಸಹಾಯಕ ಚುನಾವಣಾಧಿಕಾರಿ(ವಿಧಾನಸಭಾ ಕ್ಷೇತ್ರವಾರು) ಕಚೇರಿಯಲ್ಲಿ 1950 ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ. ಜತೆಗೆ ಪಾಲಿಕೆ ಕೇಂದ್ರ ಕಚೇರಿಯಲ್ಲಿ ಎಂಸಿಸಿ ನಿಯಂತ್ರಣ ಕೊಠಡಿಯನ್ನು ಕೂಡಾ ಸ್ಥಾಪಿಸಲಾಗಿದೆ. ಸಿವಿಜಿಲ್ ಅಪ್ಲಿಕೇಷನ್ ಮೂಲಕ ಬರುವ ದೂರುಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ವರ್ಗಾಯಿಸಿ ಕೂಡಲೆ ಕ್ರಮ ಕೈಗೊಳ್ಳಲು ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ ಎಂದು ತುಷಾರ್ ಗಿರಿನಾಥ್ ಮಾಹಿತಿ ನೀಡಿದರು.

# ಕೆಲ ರಸ್ತೆಗಳಲ್ಲಿ ಪಾರ್ಕಿಂಗ್ ನಿಷೇಧ

## ಇಂದು ಆರ್‌ಸಿಬಿ-ಕೆಕೆಆರ್ ಪಂದ್ಯ | ಪೊಲೀಸರಿಂದ ಹೈ ಅಲರ್ಟ್

**ಬೆಂಗಳೂರು:** ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಕೊಲ್ಕತ್ತಾ ನೈಟ್ ರೈಡರ್ಸ್ ಮಧ್ಯೆ ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಶುಕ್ರವಾರ (ಮಾ. 29) ಐಪಿಎಲ್ ಕ್ರಿಕೆಟ್ ಪಂದ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಕ್ರೀಡಾಂಗಣದ ಸುತ್ತಮುತ್ತ ಮಧ್ಯಾಹ್ನ 3 ಗಂಟೆಯಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮತ್ತು ಪಾರ್ಕಿಂಗ್ ವ್ಯವಸ್ಥೆಯಲ್ಲಿ ಕೆಲವೊಂದು ಬದಲಾವಣೆಗಳನ್ನು ಮಾಡಲಾಗಿದೆ.

ಪಂದ್ಯ ನಡೆಯುವ ಹಿನ್ನೆಲೆ ಕೆಲ ರಸ್ತೆಗಳಲ್ಲಿ ವಾಹನಗಳ ನಿಲುಗಡೆ ನಿಷೇಧವಿದ್ದರೆ, ಬೇರೆಡೆ ಸಾರ್ವಜನಿಕ ವಾಹನಗಳ ನಿಲುಗಡೆ ಸ್ಥಳಗಳನ್ನು ನಿಗದಿ ಮಾಡಲಾಗಿದೆ. ಚಿನ್ನಸ್ವಾಮಿ ಮೈದಾನದಲ್ಲಿ ಐಪಿಎಲ್ ಪಂದ್ಯಾವಳಿ ಹಿನ್ನೆಲೆ ಪೊಲೀಸರು ಅಲರ್ಟ್ ಆಗಿದ್ದು, ಹೆಚ್ಚುವರಿ ಪೊಲೀಸರ ನಿಯೋಜನೆ ಮಾಡಲಾಗಿದೆ. ದುಪ್ಪಟ್ಟು ಭದ್ರತೆ ಕಲ್ಪಿಸಲಾಗಿದೆ.

**ನಮ್ಮ ಮೆಟ್ರೋ ಸಂಚಾರ ಅವಧಿ ವಿಸ್ತರಣೆ**

ಐಪಿಎಲ್ ಪಂದ್ಯದ ಸಲುವಾಗಿ ನಮ್ಮ ಮೆಟ್ರೋ ರೈಲುಗಳ ಸಂಚಾರ ಅವಧಿಯನ್ನು ವಿಸ್ತರಣೆ ಮಾಡಿ ಬಿಎಂಆರ್‌ಸಿಎಲ್ ಪ್ರಕಟಣೆ ಹೊರಡಿಸಿದೆ. ಶುಕ್ರವಾರ ಹಾಗೂ ಏಪ್ರಿಲ್ 2ರಂದು ರಾತ್ರಿ 11.30 ರವರೆಗೆ ಮೆಟ್ರೋ ರೈಲು ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. ಜತೆಗೆ ಎಲ್ಲಾ ನಿಲ್ದಾಣಗಳಿಂದಲೂ ರಿಟರ್ನ್ ಪೇಪರ್ ಟಿಕೆಟ್ ಕೂಡ ಲಭ್ಯ ಇರಲಿದೆ. ಬೆಂಗಳೂರಿನಲ್ಲಿ ನಿಗದಿತ ದಿನಾಂಕದಲ್ಲಿ ನಡೆಯುವ ಪಂದ್ಯಗಳಿಗೆ ಬರುವ ರಿಟರ್ನ್ ಜರ್ನಿಯ 50 ರು.ನ ಪೇಪರ್ ಟಿಕೆಟ್‌ಗಳು ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ ಲಭ್ಯ ಇರಲಿದ್ದು, ಈ ಟಿಕೆಟ್ಗಳು ಮಧ್ಯಾಹ್ನ 2 ಗಂಟೆಯಿಂದ ಮಾರಾಟಕ್ಕೆ ಲಭ್ಯ ವಿರುತ್ತದೆ. ರಿಟರ್ನ್ ಪೇಪರ್ ಟಿಕೆಟ್ ಎಂ.ಜಿ.ರಸ್ತೆ ಹಾಗೂ ಕಬ್ಬನ್ ಪಾರ್ಕ್ ಸ್ಟೇಷನ್‌ನಿಂದ ಮಾತ್ರ ಮಾನ್ಯವಾಗಿರಲಿದೆ. ರಾತ್ರಿ 8ರ ನಂತರ ದಿನದ ಸೇವೆ ಕೊನೆಗೊಳ್ಳುವ ವರಿಗೆ ಮಾತ್ರ ರಿಟರ್ನ್ ಟಿಕೆಟ್ ಬಳಸಬಹುದು. ಕಾರ್ಡ್‌ಗಳನ್ನು ಎಂದಿ ನಂತೆ ಪ್ರಯಾಣಿಕರು ಬಳಸಬಳಸಬಹುದಾಗಿದೆ. ಅಲ್ಲದೆ, ಗೊಂದಲ ಮುಕ್ತ ವಾಪಸಾತಿಗಾಗಿ ವಾಟ್ಸಾಪ್/ನಮ್ಮ ಮೆಟ್ರೋ ಆ್ಯಪ್/ಪೇಟಿಎಂ ಮೂಲಕ ಕ್ರಿಕೆಟ್ ಪಂದ್ಯದ ಆರಂಭಕ್ಕೆ ಮುಂಚಿತವಾಗಿ ಕ್ಯೂಆರ್ ಟಿಕೆಟ್‌ಗಳನ್ನು ಖರೀದಿಸಲು ಸಾರ್ವಜನಿಕರಿಗೆ ಸೂಚಿಸಲಾಗಿದೆ.

### ವಾಹನಗಳ ನಿಲುಗಡೆ ನಿಷೇಧವಿರುವ ಪ್ರದೇಶ

- ಕ್ವೀನ್ಸ್ ರಸ್ತೆ, ಎಂಜಿ ರಸ್ತೆಯಿಂದ ಕಬ್ಬನ್ ರಸ್ತೆ, ರಾಜಭವನ ರಸ್ತೆ
- ಸೆಂಟ್ರಲ್ ಸ್ಟ್ರೀಟ್ ರಸ್ತೆ, ಕಬ್ಬನ್ ರಸ್ತೆ, ಸೆಂಟ್ ಮಾರ್ಕ್ಸ್ ರಸ್ತೆ, ಮ್ಯೂಸಿಯಂ ರಸ್ತೆ
- ಕಸ್ತೂರಿ ಬಾ ರಸ್ತೆ, ಅಂಬೇಡ್ಕರ್ ವೀದಿ ರಸ್ತೆ, ಟ್ರಿನಿಟಿ ವೃತ್ತ, ಲ್ಯಾವೆಲ್ಲೆ ರಸ್ತೆ
- ವಿಠಲ್ ಮಲ್ಯ ರಸ್ತೆ, ಕಿಂಗ್ಸ್ ರಸ್ತೆ ನೃಪತುಂಗ ರಸ್ತೆ

### ಸಾರ್ವಜನಿಕ ವಾಹನಗಳ ನಿಲುಗಡೆ ಸ್ಥಳಗಳು

- ಸೆಂಟ್ ಜೋಸೆಫ್ ಇಂಡಿಯನ್ ಸ್ಕೂಲ್ ಮೈದಾನ
- ಯು.ಬಿ ಸಿಟಿ ಪಾರ್ಕಿಂಗ್ ಸ್ಥಳ
- ಬಿ.ಎಂ.ಟಿ.ಸಿ ಬಸ್ ನಿಲ್ದಾಣದ ಮೊದಲನೆ ಮಹಡಿ ಓಲ್ಡ್ ಕೆ.ಜಿ.ಐ.ಡಿ ಬಿಲ್ಡಿಂಗ್
- ಕಿಂಗ್ಸ್ ರಸ್ತೆ, (ಕಬ್ಬನ್ ಪಾರ್ಕ್ ಒಳಭಾಗ)
- ಓಲಾ, ಉಬರ್, ಆಟೋ ಇತ್ಯಾದಿ ಕ್ಯಾಬ್‌ಗಳು ಪಿಕ್ ಅಪ್ ಮತ್ತು ಡ್ರಾಪ್ ಮಾಡುವ ಸ್ಥಳ ನಿಗದಿ ಮಾಡಲಾಗಿದೆ.